ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–304

26 ಆಗಸ್ಟ್ 2023 * ಶನಿವಾರ * ಸಂಜೆ 6.00

ಸ್ಥಳ : ರಾಜೇಂದ್ರಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಮೈಸೂರು

---

ದಿವ್ಯ ಆಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

ಅಧ್ಯಕ್ಷತೆ

**ಶ್ರೀ ಕೆ.ಎಲ್. ರೇವಣ್ಣಸ್ವಾಮಿ**
ಪ್ರಭಾರ ನಿರ್ದೇಶಕರು, ಸಾಮಾನ್ಯ ಅಭಿವೃದ್ಧಿ ವಿಭಾಗ
ಜೆಎಸ್‌ಎಸ್ ಮಹಾವಿದ್ಯಾಪೀಠ

ಉಪನ್ಯಾಸ

**ಡಾ. ಎ.ಆರ್. ಮದನಕುಮಾರ್**
ಪ್ರಾಂಶುಪಾಲರು
ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಗುಂಡ್ಲುಪೇಟೆ

ವಿಷಯ : ವಚನ ಸಾಹಿತ್ಯದಲ್ಲಿ ಜನಪರ ಚಿಂತನೆಗಳು

---

ಪ್ರಾಯೋಜಕರು

**ಶ್ರೀಮತಿ ಎ.ಜಿ. ಭವಾನಿ ಮತ್ತು ಶ್ರೀ ಎಂ. ಶಿವಪ್ರಸಾದ್**
ಮಾಲೀಕರು, ಶ್ರೀ ಅಂಕನಾಥೇಶ್ವರ ಗ್ರಾಫಿಕ್ಸ್ ಅಂಡ್ ಪ್ರಿಂಟರ್ಸ್
ನಂ. 837, 12ನೇ ಕ್ರಾಸ್, ರಾಮಾನುಜ ರಸ್ತೆ, ಮೈಸೂರು

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದ್ದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಕೆ.ಎಲ್. ರೇವಣ್ಣಸ್ವಾಮಿಯವರು** ಚಾಮರಾಜನಗರ ಜಿಲ್ಲೆ ಕುದೇರು ಗ್ರಾಮದವರು. ಬಿಕಾಂ ಪದವೀಧರರು. ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್‌ನಲ್ಲಿ ವೃತ್ತಿ ಆರಂಭಿಸಿದರು. ಸಹಾಯಕ ವ್ಯವಸ್ಥಾಪಕರು, ಉಪ ಪ್ರಧಾನ ವ್ಯವಸ್ಥಾಪಕರು ಮುಂತಾದ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿ, ಮುಖ್ಯ ಪ್ರಧಾನ ವ್ಯವಸ್ಥಾಪಕರಾಗಿ ನಿವೃತ್ತಿ ಹೊಂದಿದರು. ನಂತರ ರಾಜ್ಯದ ಪ್ರಮುಖ ಸಂಸ್ಥೆಗಳಲ್ಲಿ ಆಡಳಿತಾಧಿಕಾರಗಳು, ಹಣಕಾಸು ಅಧಿಕಾರಿಗಳಾಗಿ ಕಾರ್ಯನಿರ್ವಹಿಸಿದ್ದಾರೆ. ಹಲವಾರು ತರಬೇತಿ ಮತ್ತು ವಿಚಾರಸಂಕಿರಣಗಳಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದಾರೆ. ಐದು ದಶಕಗಳಿಗೂ ಹೆಚ್ಚಿನ ಆಡಳಿತಾನುಭವವನ್ನು ಹೊಂದಿದ್ದಾರೆ. ಪ್ರಸ್ತುತ ಜೆಎಸ್‌ಎಸ್ ಮಹಾವಿದ್ಯಾಪೀಠದ ಸಾಮಾನ್ಯ ಅಭಿವೃದ್ಧಿ ವಿಭಾಗದ ಪ್ರಭಾರ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

**ಡಾ. ಎ.ಆರ್. ಮದನಕುಮಾರ್‌ರವರು** ಕೆ.ಆರ್. ನಗರ ತಾಲ್ಲೂಕಿನ ಅಂಕನಹಳ್ಳಿ ಗ್ರಾಮದವರು. ಮೈಸೂರು ವಿಶ್ವವಿದ್ಯಾನಿಲಯದಿಂದ ಕನ್ನಡ ವಿಷಯದಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿಎಚ್‌ಡಿ ಪಡೆದಿರುವರು. ಹನೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಸಹಾಯಕ ಪ್ರಾಧ್ಯಾಪಕರಾಗಿ ವೃತ್ತಿ ಆರಂಭಿಸಿದರು. ನಂತರ ಹುಣಸೂರು, ಮಂಡ್ಯದ ಸರ್ಕಾರಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಿ, ಪ್ರಸ್ತುತ ಗುಂಡ್ಲುಪೇಟೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಕನ್ನಡ ಸಾಹಿತ್ಯ ಮತ್ತು ರಾಜಾಶ್ರಯ, ನದಿಯಾದ ನೀರ ಬಿಂದು, ಸಂಚಿತ ನಿಧಿ ಸೇರಿದಂತೆ ಹಲವಾರು ಕೃತಿಗಳನ್ನು ರಚಿಸಿದ್ದಾರೆ. ಅನೇಕ ವಿದ್ಯಾರ್ಥಿಗಳಿಗೆ ಎಂಫಿಲ್ ಮತ್ತು ಪಿಎಚ್‌ಡಿ ಮಾರ್ಗದರ್ಶನ ಮಾಡಿದ್ದಾರೆ. ಉತ್ತಮ ಶಿಕ್ಷಕ ಪ್ರಶಸ್ತಿ, ವಿಶ್ವ ಕನ್ನಡ ಚೇತನ ಪ್ರಶಸ್ತಿ, ಶಿಕ್ಷಣ ಚೇತನ ಪ್ರಶಸ್ತಿ ಸೇರಿದಂತೆ ಹಲವಾರು ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಶ್ರೀ ಎಂ. ಶಿವಪ್ರಸಾದ್‌ರವರು** ಮೈಸೂರು ಶ್ರೀ ಅಂಕನಾಥೇಶ್ವರ ಗ್ರಾಫಿಕ್ಸ್ ಅಂಡ್ ಪ್ರಿಂಟರ್ಸ್‌ನ ಮಾಲೀಕರು. ಧರ್ಮಪತ್ನಿ ಶ್ರೀಮತಿ ಎ.ಜಿ. ಭವಾನಿಯವರು ಮೈಸೂರು ಜೆಎಸ್‌ಎಸ್ ಆಸ್ಪತ್ರೆಯಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಮಗಳು ಕು. ಎಂ.ಎಸ್. ಮಾನಸ ಎಂಎಸ್ ಪದವೀಧರರಾಗಿದ್ದು ಕೆನಡಾದಲ್ಲಿ ಉದ್ಯೋಗದಲ್ಲಿದ್ದಾರೆ. ಮಗ ಶ್ರೀ ಎಂ.ಎಸ್. ಶಶಾಂಕ್ ಮಾಲಿಕ್ಯುಲರ್ ಬಯಾಲಜಿಯಲ್ಲಿ ಎಂ.ಎಸ್.ಸಿ ಪದವಿ ಪಡೆದು ಹೈದರಾಬಾದ್‌ನಲ್ಲಿ ಕಿರಿಯ ಸಂಶೋಧಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.